## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 949(1082)

ಸದಸ್ಯರ ಹೆಸರು : ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 16.12.2025

ಉತ್ತರಿಸುವವರು : ಪೌರಾಡಳಿತ ಮತ್ತು ಹಜ್ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ನಗರ ಸ್ಥಳೀಯ ಸಂಸ್ಥೆ ವ್ಯಾಪ್ತಿಯಲ್ಲಿ ರಿಕ್ಷಾ ಹಾಗೂ ಟ್ಯಾಕ್ಸಿ ವಾಹನಗಳ ನಿಲ್ದಾಣಗಳನ್ನು ಸ್ಥಾಪಿಸಲು ಇರುವ ಮಾರ್ಗಸೂಚಿಗಳೇನು? | ಯಾವುದೇ ಮಾರ್ಗಸೂಚಿಗಳು ಇರುವುದಿಲ್ಲ. |
| ಆ) | ಹೊಸದಾಗಿ ರಿಕ್ಷಾ ಹಾಗೂ ಟ್ಯಾಕ್ಸಿ ವಾಹನಗಳನ್ನು ಖರೀದಿಸಲು ನಿಲ್ದಾಣ ಲಭ್ಯತಾ ಪ್ರಮಾಣ ಪತ್ರವನ್ನು ಯಾವ ಮಾನದಂಡದಲ್ಲಿ ನೀಡಲಾಗುತ್ತಿದೆ. | ಹೊಸದಾಗಿ ರಿಕ್ಷಾ ಹಾಗೂ ಟ್ಯಾಕ್ಸಿ ವಾಹನಗಳನ್ನು ಖರೀದಿಸಲು ನಿಲ್ದಾಣ ಲಭ್ಯತಾ ಪ್ರಮಾಣ ಪತ್ರವನ್ನು ನೀಡಲಾಗುತ್ತಿಲ್ಲ. |
| ಇ) | ನಗರ ಸ್ಥಳೀಯ ಸಂಸ್ಥೆ ವ್ಯಾಪ್ತಿಯಲ್ಲಿ ಎಲ್ಲೆಂದರಲ್ಲಿ ಅನಧಿಕೃತ ರಿಕ್ಷಾ ಹಾಗೂ ಟ್ಯಾಕ್ಸಿ ನಿಲ್ದಾಣಗಳು ತಲೆ ಎತ್ತುತ್ತಿದ್ದು ಇವುಗಳ ವ್ಯವಸ್ಥಿತ ನಿಲ್ದಾಣ ಒದಗಿಸುವ ಬಗ್ಗೆ ಯಾವ ರೀತಿಯ ಕ್ರಮಕೈಗೊಳ್ಳಲಾಗಿದೆ: | ನಗರ ಸ್ಥಳೀಯ ಸಂಸ್ಥೆಗಳಲ್ಲಿ ರಿಕ್ಷಾ ಹಾಗೂ ಟ್ಯಾಕ್ಸಿ ನಿಲ್ದಾಣಗಳಿಗೆ ಸೂಕ್ತ ಸ್ಥಳಗಳನ್ನು ಗುರುತಿಸಲು ಪೋಲೀಸ್ ಇಲಾಖೆ, ಪ್ರಾದೇಶಿಕ ಸಾರಿಗೆ ಇಲಾಖೆಯ ಹಾಗೂ ನಗರ ಸ್ಥಳೀಯ ಸಂಸ್ಥೆಗಳ ಸಮನ್ವಯದೊಂದಿಗೆ ಕ್ರಮ ಕೈಗೊಳ್ಳಲಾಗುತ್ತಿದೆ. ಆದರೂ ಅನಧಿಕೃತ ವಾಹನ ನಿಲ್ದಾಣ ಕಂಡುಬಂದಲ್ಲಿ ಪುರಸಭಾ ಕಾಯ್ದೆ 1964 ರಂತೆ ಕ್ರಮಕೈಗೊಳ್ಳಲಾಗುತ್ತದೆ. |
| ಈ) | ಅನಧಿಕೃತ ರಿಕ್ಷಾ ಹಾಗೂ ಟ್ಯಾಕ್ಸಿ ನಿಲ್ದಾಣಗಳಿಂದ ನಗರ ಪ್ರದೇಶಕ್ಕೆ ವ್ಯವಹಾರಕ್ಕೆ ಖಾಸಗಿ ವಾಹನ ಮಾಲಿಕರಿಗೆ ಹಾಗೂ ಸಾರ್ವಜನಿಕರಿಗೆ ತೊಂದರೆಯಾಗಿರುವುದನ್ನು ಹೇಗೆ ನಿಭಾಯಿಸಲಾಗುತ್ತಿದೆ: ಇದಕ್ಕಾಗಿ ರಾಜ್ಯವ್ಯಾಪ್ತಿ ಒಂದು ನಿರ್ದಿಷ್ಟ ಮಾರ್ಗಸೂಚಿಯನ್ನು ಯಾವಾಗ ರಚಿಸಲಾಗುವುದು: | ಅನಧಿಕೃತ ರಿಕ್ಷಾ ಹಾಗೂ ಟ್ಯಾಕ್ಸಿ ನಿಲ್ದಾಣ ಕಂಡುಬಂದಲ್ಲಿ ಪುರಸಭಾ ಕಾಯ್ದೆ 1964 ರಂತೆ ಕ್ರಮ ಕೈಗೊಂಡು ಸಾರ್ವಜನಿಕರಿಗೆ ಹಾಗೂ ಖಾಸಗಿ ವಾಹನ ಮಾಲೀಕರಿಗೆ ತೊಂದರೆಯಾಗದಂತೆ ಕ್ರಮವಹಿಸಲಾಗುತ್ತಿದೆ.<br><br>ರಾಜ್ಯವ್ಯಾಪ್ತಿ ಒಂದು ನಿರ್ದಿಷ್ಟ ಮಾರ್ಗಸೂಚಿಯನ್ನು ರಚಿಸುವ ಪ್ರಸ್ತಾವನೆ ಇರುವುದಿಲ್ಲ. |

| | | |
|---|---|---|
| ಉ) | ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಪೌರಾಡಳಿತ ಸಂಸ್ಥೆಗಳ ವ್ಯಾಪ್ತಿಯಲ್ಲಿ ಎಷ್ಟು ಅಧಿಕೃತ ರಿಕ್ಷಾ ಹಾಗೂ ಟ್ಯಾಕ್ಸಿ ವಾಹನಗಳ ನಿಲ್ದಾಣಗಳಿವೆ; ಹೆಚ್ಚುತ್ತಿರುವ ರಿಕ್ಷಾ ಹಾಗೂ ಟ್ಯಾಕ್ಸಿ ವಾಹನಗಳ ಸಂಖ್ಯೆಯನ್ನು ಆಧರಿಸಿ ವಾಹನ ನಿಲ್ದಾಣಗಳನ್ನು ಯಾವ ರೀತಿಯಲ್ಲಿ ಗುರುತಿಸಲು ಕ್ರಮವಹಿಸಲಾಗುತ್ತಿದೆ? | ಉಡುಪಿ ಜಿಲ್ಲೆಯ ವ್ಯಾಪ್ತಿಯಲ್ಲಿ 66 ರಿಕ್ಷಾ ನಿಲ್ದಾಣಗಳು ಹಾಗೂ 28 ಟ್ಯಾಕ್ಸಿ ನಿಲ್ದಾಣಗಳಿರುತ್ತವೆ.<br><br>ದಕ್ಷಿಣ ಕನ್ನಡ ಜಿಲ್ಲೆಯ 13 ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಒಟ್ಟು 129 ರಿಕ್ಷಾ ನಿಲ್ದಾಣಗಳು ಮತ್ತು 32 ಟ್ಯಾಕ್ಸಿ ನಿಲ್ದಾಣಗಳಿರುತ್ತವೆ.<br><br>ರಿಕ್ಷಾ ನಿಲ್ದಾಣಗಳ ಬೇಡಿಕೆ ಅನುಸರಿಸಿ ನಗರ ಸ್ಥಳೀಯ ಸಂಸ್ಥೆ, ಪೋಲೀಸ್ ಇಲಾಖೆ ಹಾಗೂ ಪ್ರಾದೇಶಿಕ ಸಾರಿಗೆ ಇಲಾಖೆಯ ಜಂಟಿ ಸಮೀಕ್ಷೆ ನಡೆಸಿ, ಅಭಿಪ್ರಾಯದೊಂದಿಗೆ ಜಿಲ್ಲಾ ರಸ್ತೆ ಸುರಕ್ಷಾ ಸಮಿತಿಯಲ್ಲಿ ಮಂಡಿಸಿ, ನಿರ್ಣಯ ಕೈಗೊಂಡು ವಾಹನ ನಿಲ್ದಾಣಗಳನ್ನು ಗುರುತಿಸಲು ಕ್ರಮವಹಿಸಲಾಗುತ್ತಿದೆ. |

**ಸಂಖ್ಯೆ: ನಅಇ 317 ಜಿಇಎಲ್ 2025 (ಇ)**

(ರಹೀಂ ಖಾನ್)
ಪೌರಾಡಳಿತ ಮತ್ತು ಹಜ್ ಸಚಿವರು